Akashvani : Bangalore
Regional Bulletin In Kannada
03.11.2025 / 2.30 pm
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಬಿಹಾರ ವಿಧಾನಸಭೆ ಚುನಾವಣೆ ಬಳಿಕ ಸಂಪುಟ ಪುನರ್ ರಚನೆ ಬಗ್ಗೆ ವರಿಷ್ಠರೊಂದಿಗೆ ಚರ್ಚೆ - ಮುಖ್ಯಮಂತ್ರಿ ಸಿದ್ದರಾಮಯ್ಯ
- ಮೈಸೂರಿನ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ದೇವರಾಜ ಅರಸು ಪ್ರತಿಮೆ ಅನಾವರಣ
- ಎರಡನೇ ಬೆಳೆಗೂ ನೀರು ಹರಿಸುವಂತೆ ಆಗ್ರಹಿಸಿ ತುಂಗಭದ್ರಾ ಅಚ್ಚುಕಟ್ಟು ಪ್ರದೇಶದ ರೈತರಿಂದ ಕಂಪ್ಲಿಯಲ್ಲಿ ಪ್ರತಿಭಟನೆ
- ಬೆಂಗಳೂರು ಆಕಾಶವಾಣಿಯ ಮುಖ್ಯವಾಹಿನಿಗೆ ೭೦ರ ಹರೆಯ - ಬೆಂಗಳೂರು ಕೇಂದ್ರದಲ್ಲಿ ಇಂದು ಸಂಭ್ರಮಾಚರಣೆ

*****************

ಬಿಹಾರ ವಿಧಾನಸಭೆ ಚುನಾವಣೆಯ ಬಳಿಕ ಸಚಿವ ಸಂಪುಟ ಪುನರ್ ರಚನೆಯ ಬಗ್ಗೆ ವರಿಷ್ಠರೊಂದಿಗೆ ಚರ್ಚಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜನರ ಅಭಿಪ್ರಾಯ ಏನೇ ಇದ್ದರೂ ಹೈಕಮಾಂಡ್ ನಿರ್ಧಾರವೇ ಅಂತಿಮ ಎಂದು ಹೇಳಿದ್ದಾರೆ. ಮೈಸೂರಿನಲ್ಲಿ ಹುಲಿ ದಾಳಿ ಪ್ರಕರಣಗಳು ಹೆಚ್ಚುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಅರಣ್ಯ ಪ್ರದೇಶಗಳಲ್ಲಿ ಹೆಚ್ಚಿನ ಸಂಖ್ಯೆಗಳಲ್ಲಿ ರೆಸಾರ್ಟ್‌ಗಳು ತಲೆ ಎತ್ತುತ್ತಿದ್ದು, ಸಫಾರಿಗಳು ಸೇರಿದಂತೆ ಜನರ ಸಂಚಾರ ಹೆಚ್ಚುತ್ತಿದೆ. ಅಕ್ರಮವಾಗಿ ರೆಸಾರ್ಟ್ ಗಳನ್ನು ನಡೆಸುತ್ತಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಪ್ರವಾಸಿಗರಿಗಾಗಿ ಕೈಗೊಳ್ಳುವ ಸಫಾರಿಗಳ

ಸಂಖ್ಯೆಯನ್ನು ಕಡಿಮೆ ಮಾಡಲು ಅರಣ್ಯ ಇಲಾಖೆಗೆ ಸೂಚನೆ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ : ಮುಖ್ಯಮಂತ್ರಿ ಸಿದ್ಧರಾಮಯ್ಯ

****************

ಅಸಮಾನತೆ ನಿವಾರಣೆ ಪ್ರತಿಯೊಬ್ಬ ರಾಜಕಾರಣಿಯ ಜವಾಬ್ದಾರಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರು ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ನೂತನವಾಗಿ ಸ್ಥಾಪಿಸಿರುವ ದೇವರಾಜ ಅರಸು ಪ್ರತಿಮೆ ಅನಾವರಣಗೊಳಿಸಿ ಮಾತನಾಡಿದ ಅವರು, ಅವಕಾಶ ವಂಚಿತರಿಗೆ ಅವಕಾಶ ಒದಗಿಸಿಕೊಡುವುದು ಪ್ರತಿಯೊಬ್ಬ ರಾಜಕಾರಣಿಯ ಹೊಣೆಗಾರಿಕೆ ಆಗಬೇಕು. ಅರಸು ಅವರು ಅತ್ಯಂತ ಕೆಳಮಟ್ಟದಲ್ಲಿರುವ ಜನ ಸಮುದಾಯಗಳ ಪ್ರತಿನಿಧಿಗಳನ್ನು ವಿಧಾನಸೌಧದ ಮೆಟ್ಟಿಲು ಹತ್ತಿಸುವಂತೆ ಮಾಡಿದರು ಎಂದು ಸ್ಮರಿಸಿದ್ದಾರೆ. ಸರ್ಕಾರ ಅಸಮಾನತೆ ನಿವಾರಿಸಿ ಸಮಾನ ಅವಕಾಶಗಳನ್ನು ಸೃಷ್ಟಿಸಲು ನಿರಂತರವಾಗಿ ಶ್ರಮಿಸುತ್ತಿದೆ, ಜನಪರ, ಸಾಮಾಜಿಕ ನ್ಯಾಯದ ಪರ ಯೋಜನೆಗಳನ್ನು ರೂಪಿಸಿ ಜಾರಿಗೆ ತರುತ್ತಿದೆ ಎಂದು ಹೇಳಿದ್ದಾರೆ.

****************

ತುಂಗಭದ್ರಾ ಅಚ್ಚುಕಟ್ಟು ಪ್ರದೇಶದ ರೈತರಿಗೆ ಎರಡನೇ ಬೆಳೆಗೂ ನೀರು ಬಿಡಬೇಕೆಂದು ಆಗ್ರಹಿಸಿ ಬಳ್ಳಾರಿ ಜಿಲ್ಲೆಯ ಕಂಪ್ಲಿ ಪಟ್ಟಣದಲ್ಲಿ ಇಂದು ರೈತ ಸಂಘ ಬಂದ್ ಗೆ ಕರೆ ನೀಡಿದೆ. ಇದೇ ವೇಳೆ ಪ್ರತಿಭಟನಾಕಾರರು, ಎರಡನೇ ಬೆಳೆಗೆ ನೀರು ಬಿಡುವುದಿಲ್ಲ ಎಂದು ಹೇಳಿರುವ ಸಚಿವ ಶಿವರಾಜ್ ತಂಗಡಗಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ತುಂಗಭದ್ರ ಡ್ಯಾಂನ ಗೇಟ್‌ಗಳ ದುರಸ್ಥಿ ನೆಪದಲ್ಲಿ ನೀರು ಬಿಡೋದಿಲ್ಲ ಅನ್ನೋದು ಯಾವ ನ್ಯಾಯ ಎಂದು ಪ್ರಶ್ನಿಸಿದ್ದಾರೆ. ಮುಂಗಾರು ಮಳೆ ಉತ್ತಮವಾಗಿದ್ದರೂ ಅತಿಯಾದ ಮಳೆಯಿಂದಾಗಿ ರೈತರು ಬೆಳೆ ನಷ್ಟ ಅನುಭವಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಎರಡನೇ ಬೆಳೆಗೆ ನೀರು ಬಿಟ್ಟು ಸರ್ಕಾರ ತಕ್ಷಣವೇ ತುಂಗಭದ್ರಾ ನಿರಾವರಿ ಸಲಹಾ ಸಮಿತಿ ಸಭೆ ಕರೆದು ಚರ್ಚಿಸಬೇಕೆಂದು ಆಗ್ರಹಿಸಿದ್ದಾರೆ.

****************

ಬೆಂಗಳೂರು ಆಕಾಶವಾಣಿಯ ಮುಖ್ಯವಾಹಿನಿಗೆ ಇಂದು ೭೦ರ ಸಂಭ್ರಮ. ೧೯೫೫ರ ನವೆಂಬರ್ ೨ ರಂದು ಆರಂಭವಾದ ಆಕಾಶವಾಣಿಯ ಮುಖ್ಯ ವಾಹಿನಿ ಇಲ್ಲಿಯವರೆಗೆ ಅನೇಕ ವಿಶಿಷ್ಠ ಕಾರ್ಯಕ್ರಮಗಳನ್ನು ನೀಡುತ್ತಾ ಬಂದಿದೆ. ಜೊತೆಗೆ ಜನರ ವಿಶ್ವಾಸ ಹಾಗೂ ನಂಬಿಕೆಯನ್ನು ಉಳಿಸಿಕೊಂಡಿದೆ. ೭೦ ವರ್ಷ ತುಂಬಿದ ಹಿನ್ನೆಲೆಯಲ್ಲಿ ನಡೆದ ಸಮಾರಂಭದಲ್ಲಿ ಪದ್ಮಶ್ರೀ ಪುರಸ್ಕೃತ ಖ್ಯಾತ ಮನೋವೈದ್ಯರಾದ ಡಾ.ಸಿ.ಆರ್.ಚಂದ್ರಶೇಖರ್ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದರು. ಈ ವೇಳೆ ಮಾತನಾಡಿದ ಅವರು, ಇತರ ಮಾಧ್ಯಮಗಳು ಪ್ರಸಾರ ಮಾಡುವಂತಹ ಮಾಹಿತಿ ಹಾಗೂ ಕಾರ್ಯಕ್ರಮಗಳಿಗಿಂತ ಭಿನ್ನವಾಗಿ ಆಕಾಶವಾಣಿ ಶಿಕ್ಷಣ, ಜ್ಞಾನ ಹಾಗೂ ಜನರಿಗೆ ಮನೋರಂಜನೆ ನೀಡುತ್ತಿದೆ ಎಂದು ತಿಳಿಸಿದರು. ಉಪಮಹಾನಿರ್ದೇಶಕರಾದ ಕೆ.ಪಿ.ಸಂಜೀವ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಸಮಾರಂಭದಲ್ಲಿ ಉಪನಿರ್ದೇಶಕರಾದ ಡಾ.ಎನ್.ರಘು, ಮತ್ತು ನೂತನ್ ಎಸ್ ಕದಮ್, ಆಡಳಿತಾಧಿಕಾರಿ ಆರ್.ಶಿವಕುಮಾರ್ ಹಾಗೂ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು. ಇದೇ ವೇಳೆ ಆಕಾಶವಾಣಿ ಸಿಬ್ಬಂದಿಗೆ ಸ್ಮರಣಿಕೆ ನೀಡಲಾಯಿತು.

****************

ಜಿಲ್ಲೆಯ ಜನರ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಜಿಲ್ಲಾಧಿಕಾರಿ ವಿಶೇಷ ಮುತುವರ್ಜಿ ವಹಿಸಿ ಜಿಲ್ಲೆಯ ೫೦ಕ್ಕೂ ಹೆಚ್ಚು ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಇಸಿಜಿ ಯಂತ್ರವನ್ನು ಸಿಆರ್‌ಎಸ್ ಅನುದಾನದ ಮೂಲಕ ಕೊಡಿಸಿದ್ದಾರೆ ಎಂದು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್ ಚೆಲುವರಾಯಸ್ವಾಮಿ ತಿಳಿಸಿದ್ದಾರೆ. ಮಂಡ್ಯದಲ್ಲಿ ದಂತ ಚಿಕಿತ್ಸೆಯ ಆಶಾಕಿರಣ ಉದ್ಘಾಟಿಸಿ ಮಾತನಾಡಿದ ಅವರು, ಸಾರ್ವಜನಿಕರು ತಮ್ಮ ಆರೋಗ್ಯವನ್ನು ಕಾಲ ಕಾಲಕ್ಕೆ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದ್ದಾರೆ. ಬಾಯಿಯ ಆರೋಗ್ಯ ಕಾಪಾಡಿಕೊಳ್ಳುವುದು ಮುಖ್ಯವಾಗಿದ್ದು, ಜಿಲ್ಲೆಯ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ದಂತ ಚಿಕಿತ್ಸೆಯ ಆಶಾಕಿರಣ ಯೋಜನೆಯಡಿ ನುರಿತ ದಂತ ವೈದ್ಯರು ಆಗಮಿಸಿ ತಪಾಸಣೆ ನಡೆಸಲಿದ್ದಾರೆ ಎಂದು ಹೇಳಿದರು.

ಧ್ವನಿ- ಚಲುವರಾಯಸ್ವಾಮಿ, ಸಚಿವ

ಇದೇ ವೇಳೆ ೧೪ ಇಸಿಜಿ ಮೆಷಿನ್‌ಗಳನ್ನು ಪ್ರಾಥಮಿಕ ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿಗಳಿಗೆ ಹಸ್ತಾಂತರಿಸಿದರು.

****************

ಬೆಂಗಳೂರು ಪ್ರಧಾನ ಕಚೇರಿ ನೇಮಕಾತಿ ವಲಯದಿಂದ ಇದೇ ೧೩ರಿಂದ ೧೯ರ ವರೆಗೆ ಬಳ್ಳಾರಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಅಗ್ನಿವೀರ್ ನೇಮಕಾತಿ ರ್ಯಾಲಿ ಏರ್ಪಡಿಸಲಾಗಿದೆ. ಕರ್ನಾಟಕ, ಕೇರಳ, ಲಕ್ಷದ್ವೀಪ ಮತ್ತು ಮಾಹೆ ರಾಜ್ಯದ ಅಭ್ಯರ್ಥಿಗಳಿಗೆ ಜೂನ್ ೩೦, ೨೦೨೫ ರಿಂದ  ಜುಲೈ ೧೦, ೨೦೨೫ರವರೆಗೆ ನಡೆಸಲಾದ ಆನ್‌ಲೈನ್ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಅರ್ಹತೆ ಪಡೆದ ಅಗ್ನಿವೀರ್ ವರ್ಗಗಳ ಅರ್ಜಿದಾರರನ್ನು ವರ್ಗವಾರು ರ್ಯಾಲಿಗೆ ಕರೆಯಲಾಗಿದೆ. ಸೇನೆಯಲ್ಲಿ ಎಲ್ಲಾ ವರ್ಗಗಳ ನೋಂದಣಿಗಾಗಿ ರ್ಯಾಲಿ ಆಯೋಜಿಸಲಾಗಿದೆ. ನಿಗದಿಪಡಿಸಿದ ವಿಭಾಗಗಳಲ್ಲಿ ದಾಖಲಾತಿಗಾಗಿ ವಯಸ್ಸು, ಶಿಕ್ಷಣ ಅರ್ಹತೆ ಇತರ ಮಾನದಂಡಗಳ ವಿವರಗಳನ್ನು ವೆಬ್‌ಸೈಟ್‌ನಲ್ಲಿ ೧೨ ಮಾರ್ಚ್ ೨೦೨೫ ರಂದು ಪ್ರಕಟಿಸಲಾದ ಅಧಿಸೂಚನೆಯ ಪ್ರಕಾರ ನೀಡಲಾಗಿದೆ. ಅಭ್ಯರ್ಥಿಗಳು ಯಾವುದೇ ವಂಚಕರು ಅಥವಾ ಮಧ್ಯವರ್ತಿಗಳಿಗೆ ಮಾತಿಗೆ ಕಿವಿಗೊಡಬಾರದು. ಆನ್‌ಲೈನ್ ಸಾಮಾನ್ಯ ಪ್ರವೇಶ ಪರೀಕ್ಷೆ ಸಮಯದಲ್ಲಿ ಅಭ್ಯರ್ಥಿಗಳ ಕಾರ್ಯಕ್ಷಮತೆ, ನೇಮಕಾತಿ ರ್ಯಾಲಿಯ ಸಮಯದಲ್ಲಿ ನಡೆಸುವ ಪರೀಕ್ಷೆಗಳು ಮತ್ತು ಅಂತಿಮ ಅರ್ಹತೆಯ ಮೇಲೆ ಆಯ್ಕೆ ಮಾಡಲಾಗುತ್ತದೆ ಎಂದು ಪ್ರಕಟಣೆ ತಿಳಿಸಿದೆ.

****************

ಚಿಕ್ಕಮಗಳೂರು ಜಿಲ್ಲೆಯ ಭಗವತಿ ಅರಣ್ಯ ಪ್ರದೇಶದಲ್ಲಿ ಇಬ್ಬರನ್ನು ಕೊಂದ ಕಾಡಾನೆಯನ್ನು ಅರಣ್ಯ ಇಲಾಖೆ ಸಿಬ್ಬಂದಿ ಕಾರ್ಯಚರಣೆ ನಡೆಸಿ  ಸೆರೆಹಿಡಿದಿದ್ದಾರೆ. ಈ ಆನೆ ಕಳೆದ ೩ ದಿನಗಳ ಹಿಂದೆ ಕೆರೆಕಟ್ಟೆ ಗ್ರಾಮಲ್ಲಿ ಇಬ್ಬರು ರೈತರನ್ನು ಕೊಂದು ಹಾಕಿತು. ಅಲ್ಲದೆ ಸಾಕಷ್ಟು ಕಡೆ ಬೆಳೆ ಹಾನಿ ಮಾಡಿತ್ತು. ಒಟ್ಟು ೬ ಕುಮ್ಕಿ ಆನೆಗಳು ಅರಣ್ಯ ಇಲಾಖೆ ಸಿಬ್ಬಂದಿ ಕಾರ್ಯಚರಣೆ ನಡೆಸಿ ಆನೆಯನ್ನು ಸೆರೆಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ.

****************

ರಾಜ್ಯ ಸರ್ಕಾರ ಜಾರಿಗೆ ತಂದಿರುವ ಐದು ಖಾತರಿ ಯೋಜನೆಗಳ ಕುರಿತು ಪ್ರತಿಷ್ಠಿತ ಐದು ಸಂಶೋಧನಾ ಸಂಸ್ಥೆಗಳು ಕೈಗೊಂಡಿರುವ ಅಧ್ಯಯನಗಳ ಸಂಶೋಧನಾ ಫಲಿತಾಂಶಗಳನ್ನು ಮತ್ತು ಕಾರ್ಯನೀತಿ ಸಲಹೆಗಳನ್ನು ಭಾಗೀದಾರ ಸರ್ಕಾರಿ ಇಲಾಖೆಗಳೊಂದಿಗೆ ಹಾಗೂ ಶೈಕ್ಷಣಿಕ ಸಂಸ್ಥೆಗಳ ತಜ್ಞರೊಂದಿಗೆ ಹಂಚಿಕೊಳ್ಳಲು ಇದೇ ೫ರಂದು ಬೆಂಗಳೂರಿನಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಎಂ.ಎಸ್ ಸ್ವಾಮಿನಾಥನ್ ಸಂಶೋಧನಾ ಸಂಸ್ಥೆಯ ಅಧ್ಯಕ್ಷರಾದ ಡಾ. ಸೌಮ್ಯ ಸ್ವಾಮಿನಾಥನ್ ಭಾಗವಹಿಸಲಿದ್ದಾರೆ.

****************

ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ೭ನೇ ಘಟಿಕೋತ್ಸವವನ್ನು ಇದೇ ೫ರಂದು ಧಾರವಾಡದ ಕೃಷಿ ವಿಶ್ವವಿದ್ಯಾಲಯದ ರೈತರ ಜ್ಞಾನಾಭಿವೃದ್ಧಿ ಕೇಂದ್ರದಲ್ಲಿ ಆಯೋಜಿಸಲಾಗಿದೆ ಎಂದು ಕುಲಪತಿ ಪ್ರೊ.ಡಾ.ಸಿ.ಬಸವರಾಜು ತಿಳಿಸಿದ್ದಾರೆ.

****************

ತಿರುವನಂತಪುರದ ಮಂಗಳಾಪುರಂನಲ್ಲಿ ನಡೆಯುತ್ತಿರುವ ರಣಜಿ ಪಂದ್ಯಾವಳಿಯ ಮೊದಲ ಇನ್ನಿಂಗ್ಸ್‌ನಲ್ಲಿ ಕರ್ನಾಟಕ ನೀಡಿರುವ ೫೮೬ ರನ್‌ಗಳ ಗುರಿ ಬೆನ್ನತ್ತಿರುವ ಕೇರಳ ೫ ವಿಕೆಟ್ ಕಳೆದುಕೊಂಡು ೧೪೪ ರನ್‌ಗಳಿಸಿ ಆಡುತ್ತಿದೆ. ಕನಾಟಕ ಪರ ವಿದ್ವತ್ ಕಾವೇರಪ್ಪ ೪ ವಿಕೆಟ್ ಪಡೆದರೆ, ವೈಶಾಖ್ ವಿಜಯ್ ಕುಮಾರ್ ೧ ವಿಕೆಟ್ ಗಳಿಸಿದ್ದಾರೆ.

****************